All India Radio: Bangalore
National Bulletin In Kannada
07.04.2025  19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪೋರ್ಚುಗಲ್ ಪ್ರಧಾನಿಯೊಂದಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ನಿಯೋಗ ಮಟ್ಟದ ಮಾತುಕತೆ
- ಬಿಇಎಲ್‌ನೊಂದಿಗೆ ೨ ಸಾವಿರದ ೩೮೫ ಕೋಟಿ ರೂಪಾಯಿಗಳ ಒಪ್ಪಂದಕ್ಕೆ ರಕ್ಷಣಾ ಸಚಿವಾಲಯ ಸಹಿ
- ಭಾರತಕ್ಕೆ ನಾಳೆ ದುಬೈ ರಾಜಕುಮಾರ ಶೇಖ್ ಹಮ್ದಾನ್ ಭೇಟಿ
- ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ಕೆ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಲಿಸ್ಬನ್‌ನಲ್ಲಿ ಪೋರ್ಚುಗಲ್ ಪ್ರಧಾನಿ ಮಾರ್ಸೆಲೊ ರೆಬೊಲೊ ಡಿ ಸೌಸಾ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು.

ಸಭೆಯ ನಂತರ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾರತ-ಪೋರ್ಚುಗಲ್ ಸಂಬಂಧ ಐತಿಹಾಸಿಕವಾದುದು. ಇದನ್ನು ಈಗ ಆಧುನಿಕ ಮತ್ತು ಬಹು ಆಯಾಮದ ಪಾಲುದಾರಿಕೆಯಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಉಭಯ ದೇಶಗಳ ನಡುವೆ ವಿವಿಧ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರಚನಾತ್ಮಕ ಮಾತುಕತೆಯನ್ನು ನಡೆಸಲಾಯಿತು ಎಂದರು.

ಧ್ವನಿ: ರಾಷ್ಟ್ರಪತಿ

ಇದಕ್ಕೂ ಮುನ್ನ ರಾಷ್ಟ್ರಪತಿಗಳು, ಪೋರ್ಚುಗೀಸ್ ರಾಷ್ಟ್ರಕವಿ ಲೂಯಿಸ್ ವಾಜ್ ಡಿ ಕ್ಯಾಮೊಸ್ ಅವರ ಸಮಾಧಿಗೆ ಭೇಟಿ ನೀಡಿ ಗೌರವ ಸಲ್ಲಿಸಿದರು.

ಪ್ರವಾಸದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪೋರ್ಚುಗಲ್ ಪ್ರಧಾನಿ ಲೂಯಿಸ್ ಮಾಂಟೆನೆಗ್ರೊ ಮತ್ತು ಅಲ್ಲಿನ ಸಂಸತ್ತಿನ ಸ್ಪೀಕರ್ ಜೋಸ್ ಪೆಡ್ರೊ ಅಗುಯರ್ ಬ್ರಾಂಕೊ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ನಂತರ ರಾಷ್ಟ್ರಪತಿಗಳು ಪೋರ್ಚುಗಲ್‌ನಲ್ಲಿರುವ ಭಾರತೀಯ ಸಮುದಾಯದವರೊಂದಿಗೆ ಸಂವಾದ ನಡೆಸಲಿದ್ದಾರೆ. ಅಲ್ಲದೇ ಅವರು, ವಿವಿಧ ವಿಶ್ವವಿದ್ಯಾಲಯಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳ ಕೆಲವು ಭಾರತೀಯ ಸಂಶೋಧಕರನ್ನು ಭೇಟಿ ಮಾಡುವ ಸಾಧ್ಯತೆ ಇದೆ.

ಭಾರತ ಮತ್ತು ಪೋರ್ಚುಗಲ್ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೫೦ ವರ್ಷಗಳನ್ನು ಆಚರಿಸುತ್ತಿದೆ. ಈ ಸಂದರ್ಭದಲ್ಲಿ ರಾಷ್ಟ್ರಪತಿಗಳು ಪೋರ್ಚುಗಲ್‌ಗೆ ಭೇಟಿ ನೀಡಿದ್ದಾರೆ.

ರಾಜತಾಂತ್ರಿಕ ಸಂಬಂಧಗಳ ಪುನರ್ ಸ್ಥಾಪನೆಯ ೫೦ನೇ ವಾರ್ಷಿಕೋತ್ಸವವನ್ನು ಆಚರಿಸಲು ಭಾರತ ಮತ್ತು ಪೋರ್ಚುಗಲ್ ಅನ್ನು ಒಂದುಗೂಡಿಸುವ ಕಲಾತ್ಮಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಪ್ರದರ್ಶಿಸುವ ಸ್ಮರಣಾರ್ಥ ಅಂಚೆಚೀಟಿಯನ್ನು ಇದೇ ವೇಳೆ ರಾಷ್ಟ್ರಪತಿಗಳು ಬಿಡುಗಡೆ ಮಾಡಲಿದ್ದಾರೆ.

ತಮ್ಮ ಎರಡನೇ ಚರಣದಲ್ಲಿ ಸ್ಲೊವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರ ಆಹ್ವಾನದ ಮೇರೆಗೆ ಏಪ್ರಿಲ್ ೯ ಮತ್ತು ೧೦ ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸ್ಲೊವಾಕಿಯಾಗೆ ಭೇಟಿ ನೀಡಲಿದ್ದಾರೆ. ಕಳೆದ ೨೯ ವರ್ಷಗಳಲ್ಲಿ ಭಾರತದ ರಾಷ್ಟ್ರಪತಿಯೊಬ್ಬರು ಸ್ಲೊವಾಕಿಯಾಗೆ ಭೇಟಿ ನೀಡುತ್ತಿರುವುದು ಇದೇ ಮೊದಲು.

***************

ರಕ್ಷಣಾ ಸಚಿವಾಲಯವು ಬೆಂಗಳೂರಿನ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಜೊತೆ ಎಲೆಕ್ಟ್ರಾನಿಕ್ ವಾರ್‌ಫೇರ್ ಸೂಟ್‌ಗಳು ಮತ್ತು ಎಂಐ-೧೭ ವಿ೫ ಹೆಲಿಕಾಪ್ಟರ್‌ಗಳಿಗೆ ವಿಮಾನ ಮಾರ್ಪಾಡು ಕಿಟ್‌ಗಳಿಗಾಗಿ ಎರಡು ಸಾವಿರದ ೩೮೫ ಕೋಟಿ ರೂಪಾಯಿಗಳ ಒಪ್ಪಂದಕ್ಕೆ ಸಹಿ ಹಾಕಿದೆ.

ಇಂದು ನವದೆಹಲಿಯಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಈ ಯೋಜನೆಯು ಎಂಎಸ್‌ಎಂಇಗಳು ಸೇರಿದಂತೆ ಭಾರತೀಯ ಎಲೆಕ್ಟ್ರಾನಿಕ್ಸ್ ಮತ್ತು ಸಂಬಂಧಿತ ಕೈಗಾರಿಕೆಗಳ ಸಕ್ರಿಯ ಭಾಗವಹಿಸುವಿಕೆಯನ್ನು ಉತ್ತೇಜಿಸುತ್ತದೆ ಮತ್ತು ಪ್ರೋತ್ಸಾಹಿಸುತ್ತದೆ.

ಎಂಐ-೧೭ ವಿ೫ ಗಾಗಿ ಸೂಟ್ ಸ್ಥಳೀಯ ಇಡಬ್ಲ್ಯೂ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುವಲ್ಲಿ ಮಹತ್ವದ ಮುನ್ನಡೆಯಾಗಿದ್ದು, ಮೇಕ್-ಇನ್-ಇಂಡಿಯಾ ಉಪಕ್ರಮಕ್ಕೆ ಅನುಗುಣವಾಗಿ ದೇಶವನ್ನು ಆತ್ಮನಿರ್ಭರ್ ಮಾಡುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

***************

ನವದೆಹಲಿಯಲ್ಲಿ ಬುಧವಾರ ನಡೆಯಲಿರುವ ನವಕರ್ ಮಹಾಮಂತ್ರ ದಿವಸ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

ನವಕರ್ ಮಹಾಮಂತ್ರ ದಿವಸ್ ಎಂಬುದು ಜೈನ ಧರ್ಮದ ಅತ್ಯಂತ ಗೌರವಾನ್ವಿತ ಮತ್ತು ಸಾರ್ವತ್ರಿಕ ಮಂತ್ರವಾದ ನವಕರ್ ಮಹಾಮಂತ್ರದ ಸಾಮೂಹಿಕ ಪಠಣದ ಮೂಲಕ, ಜನರನ್ನು ಒಗ್ಗೂಡಿಸಲು ಪ್ರಯತ್ನಿಸುವ, ಆಧ್ಯಾತ್ಮಿಕ ಸಾಮರಸ್ಯ ಮತ್ತು ನೈತಿಕ ಪ್ರಜ್ಞೆಯ ಸ್ಮರಣೀಯ ಆಚರಣೆಯಾಗಿದೆ.

***************

ವಕ್ಫ್ ತಿದ್ದುಪಡಿ ವಿಧೇಯಕ ೨೦೨೫ರ ಸಾಂವಿಧಾನಿಕ ಮಾನ್ಯತೆಯನ್ನು ಪ್ರಶ್ನಿಸಿರುವ ಅರ್ಜಿಗಳನ್ನು ತ್ವರಿತ ವಿಚಾರಣೆಗೆ ಕೈಗೆತ್ತಿಕೊಳ್ಳಲು ಸುಪ್ರಿಂಕೋರ್ಟ್ ಇಂದು ಸಮ್ಮತಿಸಿದೆ.

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ, ನ್ಯಾಯಮುತಿಗಳಾದ ಸಂಜಯ್ ಕುಮಾರ್ ಹಾಗೂ ಕೆ.ವಿ.ವಿಶ್ವನಾಥನ್ ಅವರನ್ನು ಒಳಗೊಂಡ ಪೀಠವು, ಜಮಾಯತ್-ಉಲಮಾ-ಹಿಂದ್ ಪರವಾಗಿ ಹಿರಿಯ ವಕೀಲ ಕಪಿಲ್ ಸಿಬಲ್ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸಿತು.

ಸಂಸತ್ತಿನಲ್ಲಿ ತೀವ್ರ ಚರ್ಚೆಯ ನಂತರ ಈಗಾಗಲೇ ಅಂಗೀಕೃತಗೊಂಡ ವಕ್ಫ್ ತಿದ್ದುಪಡಿ ವಿಧೇಯಕ ೨೦೨೫ಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಧಿಕೃತ ಮುದ್ರೆ ಒತ್ತಿದ್ದಾರೆ.

***************

ದೇಶದಲ್ಲಿ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ೫೦ ರೂಪಾಯಿ ಏರಿಸಲಾಗಿದೆ. ನೂತನ ದರ ನಾಳೆಯಿಂದಲೇ ಜಾರಿಗೆ ಬರಲಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

ಇನ್ನೊಂದೆಡೆ, ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ತಲಾ ೨ ರೂಪಾಯಿ ಹೆಚ್ಚಿಸಲಾಗಿದೆ. ಆದರೆ, ಇದು ಸಾರ್ವಜನಿಕರ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಹೆಚ್ಚುವರಿ ಅಬಕಾರಿ ಸುಂಕವನ್ನು ತೈಲ ಕಂಪನಿಗಳು ಭರಿಸಲಿವೆ. ಇದು ಕೂಡ ನಾಳೆಯಿಂದಲೇ ಜಾರಿಗೆ ಬರಲಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

***************

ಅಮೆರಿಕಾ ತೆರಿಗೆ ನೀತಿ ಹಾಗೂ ಜಾಗತಿಕ ಆರ್ಥಿಕ ಅನಿಶ್ಚಿತತೆ ಹಿನ್ನೆಲೆಯಲ್ಲಿ ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ಭಾರೀ ಪ್ರಮಾಣದಲ್ಲಿ ಕುಸಿತ ಕಂಡಿದೆ.

ಸೆನ್ಸೆಕ್ಸ್ ೨ ಸಾವಿರದ ೨೨೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೩ ಸಾವಿರದ ೧೩೮ ಅಂಕಗಳು ದಾಖಲಾಗಿದೆ.

ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೭೪೩ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೧೬೨ ಅಂಕಗಳು ದಾಖಲಾಗಿದೆ.

***************

ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿಯಲ್ಲಿ ಈವರೆಗೆ ೩೨ ಲಕ್ಷ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ೫೨ ಕೋಟಿ ಸಾಲವನ್ನು ಮಂಜೂರು ಮಾಡಲಾಗಿದೆ.

ಕಾರ್ಪೋರೇಟ್ ಅಲ್ಲದ, ಕೃಷಿಯೇತರ ಸಣ್ಣ ಮತ್ತು ಸೂಕ್ಷ್ಮ ಉದ್ಯಮಗಳಿಗೆ ೧೦ ಲಕ್ಷ ರೂಪಾಯಿಗಳವರೆಗೆ ಮೇಲಾಧಾರ ರಹಿತ ಸಾಲಗಳನ್ನು ಒದಗಿಸಲು ಈ ಯೋಜನೆಯನ್ನು ೨೦೧೫ರಲ್ಲಿ ಕೇಂದ್ರ ಸರ್ಕಾರದಿಂದ ಪ್ರಾರಂಭಿಸಲಾಯಿತು. ಇದು ಆರ್ಥಿಕ ಸೇರ್ಪಡೆಗೆ ಅನುಕೂಲವಾಗುವಂತೆ ಮತ್ತು ಉದ್ಯಮಿಗಳನ್ನು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿದೆ.

ಈ ಯೋಜನೆಯಡಿಯಲ್ಲಿ ಮೂರು ವರ್ಷಗಳ ಅವಧಿಗೆ ಸಾಲವನ್ನು ನೀಡಲಾಗುತ್ತಿದೆ. ಇದರಲ್ಲಿ ೫೦ ಸಾವಿರ ರೂಪಾಯಿವರೆಗಿನ ಶಿಶು ಸಾಲ, ೫ ಲಕ್ಷ ರೂಪಾಯಿಗಳವರೆಗೆ ಕಿಶೋರ್ ಸಾಲ ಮತ್ತು ೧೦ ಲಕ್ಷ ರೂಪಾಯಿಗಳವರೆಗೆ ತರುಣ್ ಸಾಲ ಎಂದು ಮೂರು ವಿಭಾಗಗಳಲ್ಲಿ ಸಾಲ ನೀಡಲಾಗುತ್ತಿದೆ.

ಮುದ್ರಾ ಸಾಲಗಳನ್ನು ಶೇಕಡ ೭೦ರಷ್ಟು ಮಹಿಳಾ ಉದ್ಯಮಿಗಳು ಬಳಸಿಕೊಳ್ಳುವ ಮೂಲಕ ತಮ್ಮ ಆರ್ಥಿಕ ಸ್ವಾತಂತ್ರ್ಯವನ್ನು ಬಲಪಡಿಸಿಕೊಳ್ಳುತ್ತಿದ್ದಾರೆ.

***************

ದುಬೈ ರಾಜಕುಮಾರ, ಉಪಪ್ರಧಾನಿ ಮತ್ತು ಯುಎಇ ರಕ್ಷಣಾ ಸಚಿವ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಅಲ್ ಮಕ್ತೌಮ್ ನಾಳೆಯಿಂದ ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ.

ದುಬೈ ರಾಜಕುಮಾರರಾಗಿ ಇದು ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಅವರೊಂದಿಗೆ ದುಬೈನ ಹಲವು ಸಚಿವರು, ಹಿರಿಯ ಸರ್ಕಾರಿ ಅಧಿಕಾರಿಗಳು ಮತ್ತು ಉನ್ನತ ಮಟ್ಟದ ಉದ್ಯಮಿಗಳ ನಿಯೋಗ ಭಾರತಕ್ಕೆ ಆಗಮಿಸಲಿದ್ದಾರೆ.

ವಿದೇಶಾಂಗ ಸಚಿವಾಲಯದ ಪ್ರಕಾರ, ದುಬೈ ರಾಜಕುಮಾರನಿಗೆ ಪ್ರಧಾನಿ ನರೇಂದ್ರ ಮೋದಿ ಔತಣಕೂಟ ಏರ್ಪಡಿಸಲಿದ್ದಾರೆ. ಅವರು, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಜೊತೆ ಸಭೆ ನಡೆಸಲಿದ್ದಾರೆ.

ನಾಳೆ ಸಂಜೆ ಮುಂಬೈಗೆ ದುಬೈ ರಾಜಕುಮಾರ ಭೇಟಿ ನೀಡಲಿದ್ದಾರೆ. ಈ ವೇಳೆ ಭಾರತ ಮತ್ತು ದುಬೈನ ಪ್ರಮುಖ ಉದ್ಯಮಿಗಳೊಂದಿಗೆ ನಡೆಯುವ ದುಂಡು ಮೇಜಿನ ಸಭೆಯಲ್ಲಿ ಅವರು ಭಾಗವಹಿಸಲಿದ್ದಾರೆ.

***************

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಾಳೆಯಿಂದ ಇದೇ ೧೩ ರವರೆಗೆ ಬ್ರಿಟನ್ ಮತ್ತು ಆಸ್ಟ್ರಿಯಾಕ್ಕೆ ಭೇಟಿ ನೀಡಲಿದ್ದಾರೆ. ಈ ವೇಳೆ, ಎರಡೂ ದೇಶಗಳಲ್ಲಿ ಸಚಿವ ಮಟ್ಟದ ದ್ವಿಪಕ್ಷೀಯ ಸಭೆಗಳಲ್ಲಿ ಭಾಗವಹಿಸಲಿದ್ದಾರೆ.

***************

ಎರಡನೇ ಹಂತದ ಮೊದಲ ಆವೃತ್ತಿಯ ನೌಕಾ ಕಮಾಂಡರ್‌ಗಳ ಸಮಾವೇಶ -೨೦೨೫ ದೆಹಲಿಯಲ್ಲಿಂದು ಆರಂಭವಾಗಿದೆ.

ಉನ್ನತಮಟ್ಟದ ದ್ವೈವಾರ್ಷಿಕ ಸಮಾವೇಶದಲ್ಲಿ ಮಹತ್ವದ ಕಾರ್ಯತಂತ್ರಗಳು, ಕಾರ್ಯಾಚರಣೆ ಮತ್ತು ಆಡಳಿತಾತ್ಮಕ ವಿಷಯಗಳ ಬಗ್ಗೆ ನೌಕಾ ಕಮಾಂಡರ್‌ಗಳು ಚರ್ಚಿಸಲಿದ್ದಾರೆ.

ಹಿಂದೂ ಮಹಾಸಾಗರ ಪ್ರಾಂತ್ಯದಲ್ಲಿ ಪ್ರಮುಖ ಭದ್ರತಾ ಪಾಲುದಾರ ರಾಷ್ಟ್ರವಾಗಿ ಭಾರತದ ಪಾತ್ರ ಹಾಗೂ ಪ್ರಾದೇಶಿಕ ಶಾಂತಿ, ಭದ್ರತೆ ಮತ್ತು ಸ್ಥಿರತೆಯಲ್ಲಿ ಭಾರತೀಯ ನೌಕಾ ಪಡೆಯ ಕೊಡುಗೆ ನಾಲ್ಕು ದಿನಗಳ ಈ ಸಮಾವೇಶದಲ್ಲಿ ಪ್ರಮುಖವಾಗಿ ಪ್ರಸ್ತಾಪವಾಗಲಿದೆ. ರಕ್ಷಣೆ, ನೌಕಾಪಡೆ ಮತ್ತು ವಾಯುಪಡೆ ಮುಖ್ಯಸ್ಥರು ಸಮಾವೇಶದಲ್ಲಿ ಪಾಲ್ಗೊಂಡು, ನೌಕಾ ಕಮಾಂಡರ್‌ಗಳನ್ನು ತಮ್ಮ ಸೇವೆಯಲ್ಲಿ ಮತ್ತಷ್ಟು ಉತ್ತೇಜಿಸಲಿದ್ದಾರೆ.

***************

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರಿಮೀಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್  ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

******** ಮುಕ್ತಾಯ *******